**Fax:** 08282-256262
**E-mail:**kuvempuacademic@gmail.com

Phone No - 08282-256149
**Website:**www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

**ಶೈಕ್ಷಣಿಕ ವಿಭಾಗ,** ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ, ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

ಸಂಖ್ಯೆ:ಕುವಿ:ಶೈವಿ:ಎಸಿ–6:3435 :2021–22

ದಿನಾಂಕ:19–11–2021

## ಸುತ್ತೋಲೆ

**ವಿಷಯ:– ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆ ಜಾರಿಗೆ ತರುವ ಬಗ್ಗೆ.**

ಉಲ್ಲೇಖ:– ಸರ್ಕಾರದ ಆದೇಶ ಸಂಖ್ಯೆ:AGRI-AML/141/2021 ಬೆಂಗಳೂರು, ದಿನಾಂಕ:07–08–2021.

* * * * *

ಉಲ್ಲೇಖಿತ ಆದೇಶದಲ್ಲಿ ಸರ್ಕಾರವು ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಆದೇಶಿಸಿದೆ. ಇದಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶದ ಪ್ರತಿಯನ್ನು ವಿಶ್ವವಿದ್ಯಾಲಯದ ಅಂತರ್‌ಜಾಲ(www.kuvempu.ac.in)ದಲ್ಲಿ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಸರ್ಕಾರಿ ಸುತ್ತೋಲೆಯನ್ವಯ ಸೂಕ್ತಕ್ರಮಕೈಗೊಳ್ಳಲು ತಿಳಿಸಲಾಗಿದೆ.

ಕರಡು ಕುಲಸಚಿವರಿಂದ
ಅನುಮೋದನೆಯಾಗಿದೆ.

ಉಪಕುಲಸಚಿವರು 19/11/2021

ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ–577451,
ಶಿವಮೊಗ್ಗ ಜಿಲ್ಲೆ.

19/11/2021

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು/ ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು/ ಚಿಕ್ಕಮಗಳೂರು – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಕಡೂರು/ ಚಿಕ್ಕಮಗಳೂರು – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ
3. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ / ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕ ಪದವಿಗಳ ಸಂಯೋಜಿತ/ ಘಟಕ/ ನೇರ ಆಡಳಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ

ಪ್ರತಿಗಳು

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ರಕ್ಷಣಾ ಕಡತ.
3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

(ಕೃಷಿ ಇಲಾಖೆ)

ದೂರವಾಣಿ ಸಂ..08182-222635

email: dagrshi@rediffmail.com

ಜಂಟಿ ಕೃಷಿ ನಿರ್ದೇಶಕರ ಕಛೇರಿ

ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ -577202

ಸಂ.ಸ.ಕೃ.ನಿ(ಉ&ಮೌ)/ರೈ.ವಿ.ನಿ.ತಂ/೧೧/ಕು.ವಿಶ್ವ/2021-22 930 ದಿನಾಂಕ:08-11-2021

ಇವರಿಗೆ,

REGISTRAR

Kuvempu University

Jnanashaydri

Shankarghatta-577451

Registrar's Personal Section To No. 278 Date 11/11/2021

Kuvempu University Academic Section No 790 Dt 15/11/21

ಮಾನ್ಯರೆ,

ವಿಷಯ: ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮದಡಿ ರೈತರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುವಬಗ್ಗೆ ಪ್ರಚಾರ ನೀಡುವ ಕುರಿತು.

ಉಲ್ಲೇಖ: ಅಪರ ಕೃಷಿ ನಿರ್ದೇಶಕರು, ಮಾನವ ಸಂಪನ್ಮೂಲ ಅಭಿವೃದ್ಧಿ, ಕೃಷಿ ಆಯುಕ್ತಾಲಯ,ಬೆಂಗಳೂರು ಇವರ ಪತ್ರ ಸಂ. ಉಕೃನಿ/ತಾಂ-2/ಹೊಸ ಶಿಷ್ಯವೇತನ/3/2021-22, ದಿನಾಂಕ:28.10.2021

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮುಖ್ಯಮಂತ್ರಿ ರೈತ ವಿದ್ಯಾನಿಧಿ' ಕಾರ್ಯಕ್ರಮಕ್ಕೆ ದಿನಾಂಕ: 05.09.2021 ರಂದು ಮಾನ್ಯ ಮುಖ್ಯಮಂತ್ರಿಯವರಿಂದ ಚಾಲನೆ ನೀಡಲಾಗಿರುತ್ತದೆ. ಸದರಿ ಯೋಜನೆಯಡಿ ಸರ್ಕಾರದ ಆದೇಶದನ್ವಯ ರೈತರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಬೇಕಾಗಿದ್ದು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ಮಾಹಿತಿ ನೀಡಿ ಪ್ರಚಾರ ಕೈಗೊಂಡು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಲು ಕ್ರಮ ವಹಿಸಬೇಕಾಗಿ ವಿನಂತಿಸುತ್ತಾ ಸರ್ಕಾರದ ಆದೇಶ ಮತ್ತು ಮಾರ್ಗಸೂಚಿ, SSP ತಂತ್ರಾಂಶದ ಬಳಕೆದಾರರ ಕೈಪಿಡಿ ಮತ್ತು ಪೋಸ್ಟರ್ ಗಳನ್ನು ಈ ಪತ್ರದ ಲಗತ್ತು ಕಳುಹಿಸುತ್ತಾ, ರೈತರ ಮಕ್ಕಳಿಗೆ 'ಮುಖ್ಯಮಂತ್ರಿ ರೈತ ವಿದ್ಯಾ ನಿಧಿ' ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಲು ಅನುಕೂಲ ಮಾಡಿಕೊಡುವಂತೆ ಕೋರಿದೆ.ಮುಂದುವರೆದು, ಲಗತ್ತಿಸಿರುವ **ಅನುಬಂಧ-1** ರಲ್ಲಿನ ತಮ್ಮ ವ್ಯಾಪ್ತಿಯ ಶಿವಮೊಗ್ಗ ಜಿಲ್ಲೆಯಲ್ಲಿ 2020-21 ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಅಂಕಿಅಂಶಗಳ ಮಾಹಿತಿಯನ್ನು ಒದಗಿಸುವಂತೆ ಸಹ ಕೋರಿದೆ.

12 NOV 2021 4332

ತಮ್ಮ ವಿಶ್ವಾಸಿ

ಜಂಟಿ ಕೃಷಿ ನಿರ್ದೇಶಕರು

ಶಿವಮೊಗ್ಗ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆ ಜಾರಿಗೆ ತರುವ ಬಗ್ಗೆ.

ಓದಲಾಗಿದೆ: ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟದ ನಿರ್ಣಯ (ಪ್ರಕರಣ ಸಂಖ್ಯೆ: ಸಿ : 318/2021)

*****

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರುವ ಬಗ್ಗೆ ಚರ್ಚಿಸಲಾಯಿತು. ಅದರಂತೆ, ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣಕ್ಕೆ ಒತ್ತುಕೊಡಲು ಮತ್ತು ಪ್ರೋತ್ಸಾಹಿಸಲು ರೂಪಾಯಿ ಒಂದು ಸಾವಿರ ಕೋಟಿಗಳ ಹೆಚ್ಚುವರಿ ವೆಚ್ಚದಲ್ಲಿ ಒಂದು ಹೊಸ ಶಿಷ್ಯ ವೇತನ (Scholoarship) ಯೋಜನೆಯನ್ನು ಜಾರಿಗೆ ತರಲು ಸಚಿವ ಸಂಪುಟವು ನಿರ್ಧರಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ಬೆಂಗಳೂರು ದಿನಾಂಕ: 07.08.2021.**

ಮೇಲೆ ಹೇಳಿರುವ ಸಚಿವ ಸಂಪುಟದ ನಿರ್ಣಯದ ಹಿನ್ನೆಲೆಯಲ್ಲಿ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರಲು ಯೋಜನೆಯ ರೂಪುರೇಷೆಗಳನ್ನು ರಚಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ, ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer - DBT) ಪದ್ಧತಿಯ ಮೂಲಕ 2021-22ನೇ ಆರ್ಥಿಕ ವರ್ಷದ ಸಾಲಿನಿಂದ ಜಾರಿಗೆ ಬರುವಂತೆ ಈ ಮುಂದಿನ ಪಟ್ಟಿಯಲ್ಲಿ ವಿವರಿಸಿರುವಂತೆ ಶಿಷ್ಯವೇತನದ ಹಣದ ಮೊತ್ತವನ್ನು ವಾರ್ಷಿಕ ಶಿಷ್ಯವೇತನ (Scholarship) ರೂಪದಲ್ಲಿ ಒದಗಿಸಲು ಮತ್ತು ಪಾವತಿಸಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

......2

| ಕ್ರಮ ಸಂಖ್ಯೆ | ಕೋರ್ಸ್ ನ ಹೆಸರು / ಕೋರ್ಸ್ ನ ವಿಧಗಳು | ಹುಡುಗರು / ಪುರುಷರು | ಹುಡುಗಿಯರು / ಅನ್ಯ ಲಿಂಗದವರು |
|---|---|---|---|
| 1 | ಪದವಿಯ ಮುಂಚೆ ಪಿ.ಯು.ಸಿ / ಐ.ಟಿ.ಐ/ ಡಿಪ್ಲೋಮಾ | ರೂ. 2500/- | ರೂ. 3000/- |
| 2 | ಎಲ್ಲಾ ಬಿ.ಎ/ ಬಿ.ಎಸ್.ಸಿ/ ಬಿ.ಕಾಂ, ಇತ್ಯಾದಿ;<br>ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸ್ ಗಳನ್ನು ಹೊರತುಪಡಿಸಿ. | ರೂ. 5000/- | ರೂ. 5500/- |
| 3 | ಎಲ್.ಎಲ್.ಬಿ/ ಪ್ಯಾರ ಮೆಡಿಕಲ್ / ಬಿ.ಫಾರ್ಮ್/ ನರ್ಸಿಂಗ್, ಇತ್ಯಾದಿ., ವೃತ್ತಿಪರ ಕೋರ್ಸ್ ಗಳು | ರೂ. 7500/- | ರೂ. 8000/- |
| 4 | ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್ ಗಳು | ರೂ. 10,000/- | ರೂ. 11,000/- |

<u>ಈ ಶಿಷ್ಯವೇತನಕ್ಕೆ ಈ ಕೆಳಕಂಡ ಅರ್ಹವಿವರಣೆಗಳನ್ನು ಪರಿಗಣಿಸತಕ್ಕದ್ದು:</u>

(ಅ) ರೈತ (Farmer), ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ / ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ;

(ಆ) ಮಕ್ಕಳು, ಎಂದರೆ ಕಾನೂನಿನ ಪ್ರಕಾರ ದತ್ತು ಪಡೆದಿರುವ ಮಕ್ಕಳು ಸೇರಿದಂತೆ ಪೋಷಕ / ಪೋಷಕರ ಜೈವಿಕ ಸಂತತಿ. ಒಂದು ಪಕ್ಷ ಯಾವುದೇ ಮಕ್ಕಳಿಗೆ ಪೋಷಕ/ ಪೋಷಕರು ಇಲ್ಲದೆ ಇದ್ದ ಸಂದರ್ಭದಲ್ಲಿ ಉಳುಮೆ ಮಾಡುವಂತಹ / ಕೃಷಿ ಮಾಡುವಂತಹ ಜಮೀನನ್ನು ಅವರು ಹೊಂದಿರತಕ್ಕದ್ದು; ಈ ಷರತ್ತು, ಅವರುಗಳಿಗೆ ಈ ಯೋಜನೆಯ ಲಾಭವನ್ನು ಪಡೆಯಲು ಅನುಕೂಲವಾಗುತ್ತದೆ.

<u>ಈ ಶಿಷ್ಯವೇತನವು (Scholarship) ಈ ಮುಂದಿನ ಷರತ್ತುಗಳನ್ನು ಒಳಗೊಂಡಿರುತ್ತದೆ;</u>

i) ಈ ರೈತರ ಮಕ್ಕಳು ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ಶಿಷ್ಯವೇತನಕ್ಕೆ ಮಾತ್ರ ಅರ್ಹರಾಗುತ್ತಾರೆ. ಆದರೆ, ಮೆರಿಟ್, ಅರ್ಹತಾ ಪರೀಕ್ಷೆ, ಶೈಕ್ಷಣಿಕ ಪರೀಕ್ಷೆಗಳಲ್ಲಿ ರಾಂಕ್ ಇತ್ಯಾದಿಗಳ ಆಧಾರದ ಮೇಲೆ ಪಡೆಯುವ ಶಿಷ್ಯವೇತನ / ಪ್ರಶಸ್ತಿ (award)/ ಪ್ರತಿಫಲ (reward) – ಇವುಗಳನ್ನು ರೈತರ ಮಕ್ಕಳು ಪಡೆದಿದ್ದರೂ, ಈ ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ.

..3

ii) ರೈತರ ಮಕ್ಕಳ ತಂದೆ-ತಾಯಿ ಇಬ್ಬರೂ ಕೃಷಿ ಜಮೀನಿನ ಒಡೆಯರಾಗಿದ್ದರೆ, ಈ ಯೋಜನೆಯಲ್ಲಿ ಒಂದು ಶಿಷ್ಯವೇತನಕ್ಕೆ ಮಾತ್ರ ರೈತರ ಮಕ್ಕಳು ಅರ್ಹರಾಗಿರುತ್ತಾರೆ.

iii) ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್ / ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸ್‌ನ ಸೆಮೆಸ್ಟರ್‌ನಲ್ಲಿ / ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್ / ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನಃ ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ.

iv) ಈ ಶಿಷ್ಯವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸ್‌ಗೆ ನೀಡಲಾಗುವುದು. ಉದಾಹರಣೆಗೆ, "X ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ, ಈ ಕೋರ್ಸ್‌ಗೆ ಶಿಷ್ಯವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ.

ಈ ಆದೇಶವನ್ನು ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದನುಸಾರ (ಪ್ರಕರಣ ಸಂಖ್ಯೆ: ಸಿ: 318/2021) ಮತ್ತು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 92 ವೆಚ್ಚ-4/2021, ದಿನಾಂಕ: 06.08.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ರಫೀ ಅಹಮದ್ ಎಂ.ಎಸ್)**
ಸರ್ಕಾರದ ಜಂಟಿ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇದನ್ನು ಇ-ವಿಶೇಷ ಗಜೆಟ್ ನಲ್ಲಿ ಹೊರಡಿಸಲು ಕೋರಿದೆ.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರು.
8. ಕುಲಪತಿಗಳು, ರಾಜ್ಯದ ಎಲ್ಲಾ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು/ ಕೃಷಿ ಪೂರಕ ವಿಜ್ಞಾನಗಳ ವಿಶ್ವವಿದ್ಯಾಲಯಗಳು.
9. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
10. ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು,
12. ಎಲ್ಲಾ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
13. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ (ಪ್ರಕರಣ ಸಂಖ್ಯೆ: ಸಿ : 318/2021), ವಿಧಾನಸೌಧ, ಬೆಂಗಳೂರು.
14. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
15. ಯೋಜನಾ ನಿರ್ದೇಶಕರು, ನೇರ ನಗದು ವರ್ಗಾವಣೆ ಕೋಶ (Direct Benefit Transfer – DBT Cell), ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
16. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ- ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಶಾಖಾರಕ್ಷಾ ಕಡತ/ ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿ.

*****

# ಕೃಷಿ ಇಲಾಖೆ





ಶ್ರೀ ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು

## ರೈತರ ಮಕ್ಕಳಿಗೆ ಉನ್ನತ ಶಿಕ್ಷಣ

# ಮುಖ್ಯಮಂತ್ರಿ ರೈತ ವಿದ್ಯಾನಿಧಿ

**2021-22ನೇ ಸಾಲಿನ ಶೈಕ್ಷಣಿಕ ವರ್ಷದ ಶಿಷ್ಯವೇತನ ನೊಂದಾವಣೆಗಾಗಿ ಆಹ್ವಾನ**

**ಜಾಲತಾಣ https://ssp.postmatric.karnataka.gov.in/**

### ಅರ್ಜಿ ಸಲ್ಲಿಕೆ ಹಂತಗಳು:

- ಮೊದಲನೇ ಹಂತ ವಿದ್ಯಾರ್ಥಿಗಳ ಖಾತೆ ಸೃಜನೆ.
- ಎರಡನೇ ಹಂತ ವಿದ್ಯಾರ್ಥಿಗಳ ವೈಯಕ್ತಿಕ ಹಾಗೂ ಶೈಕ್ಷಣಿಕ ವಿವರಗಳನ್ನು ದಾಖಲಿಸುವುದು.

2021-22ನೇ ಶೈಕ್ಷಣಿಕ ವರ್ಷದ ದಾಖಲಾತಿ ಪೂರ್ಣಗೊಂಡ ನಂತರ ಎರಡನೇ ಹಂತದಲ್ಲಿ ಮಾಹಿತಿ ನಮೂದು ಪ್ರಕ್ರಿಯೆ ಪೂರ್ಣಗೊಳಿಸುವುದು.



ಮಾನ್ಯ ಕೃಷಿ ಸಚಿವರಾದ ಶ್ರೀ ಬಿ.ಸಿ. ಪಾಟೀಲ್ ಅವರು "ಮುಖ್ಯಮಂತ್ರಿ ರೈತ ವಿದ್ಯಾನಿಧಿ" ಲೋಕಾರ್ಪಣಾ ಕಾರ್ಯಕ್ರಮದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಉಪಸ್ಥಿತರಿದ್ದರು.

**'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ಕಾರ್ಯಕ್ರಮದಡಿ ನೀಡಲಾಗುವ ವಾರ್ಷಿಕ ಶಿಷ್ಯ ವೇತನದ ವಿವರ**

| ಕ್ರ. ಸಂ | ಕೋರ್ಸ್‌ಗಳು | ವಿದ್ಯಾರ್ಥಿಗಳು/ ಹುಡುಗರು | ವಿದ್ಯಾರ್ಥಿನಿಯರು/ ಅನ್ಯಲಿಂಗದವರು |
|---|---|---|---|
| 1 | ಪಿ.ಯು.ಸಿ / ಐ.ಟಿ.ಐ/ ಡಿಪ್ಲೊಮಾ | ರೂ.2.500/- | ರೂ.3.000/- |
| 2 | ಬಿ.ಎ./ಬಿ.ಎಸ್‌.ಸಿ/ಬಿ.ಕಾಂ ಇನ್ನಿತರೆ ಪದವಿ ಕೋರ್ಸ್‌ಗಳು | ರೂ.5.000/- | ರೂ.5.500/- |
| 3 | ಎಲ್‌.ಎಲ್‌.ಬಿ/ಪ್ಯಾರಾಮೆಡಿಕಲ್‌/ಬಿ.ಫಾರ್ಮ್‌/ನರ್ಸಿಂಗ್ ಇನ್ನಿತರೆ ವೃತ್ತಿಪರ ಕೋರ್ಸ್‌ಗಳು | ರೂ.7.500/- | ರೂ.8.000/- |
| 4 | ಎಂ.ಬಿ.ಬಿ.ಎಸ್‌/ಬಿ.ಇ/ಬಿ.ಟೆಕ್ ಮತ್ತು ಎಲ್ಲ ಸ್ನಾತಕೋತ್ತರ ಕೋರ್ಸ್‌ಗಳು | ರೂ.10.000/- | ರೂ.11.000/- |

ಷರತ್ತು:
- ವಿದ್ಯಾರ್ಥಿಯು ರೈತರ ಮಕ್ಕಳಾಗಿರಬೇಕು. ವಿದ್ಯಾರ್ಥಿಯ ತಂದೆ ಅಥವಾ ತಾಯಿಯು ರೈತರ ಗುರುತಿನ ಸಂಖ್ಯೆ(FID) ಹೊಂದಿರಬೇಕು.
- 21-22ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರವೇಶ ಹೊಂದಿರಬೇಕು.

ವಿಶೇಷ ಸೂಚನೆ: ಪುನರಾವರ್ತಿತ ವಿದ್ಯಾರ್ಥಿಗಳು (Repeaters) ಅರ್ಹರಿರುವುದಿಲ್ಲ.

"ನಮ್ಮ ವೈವಿಧ್ಯಮಯ ಸಂಸ್ಕೃತಿಯ ಶ್ರೇಷ್ಠ ಪರಂಪರೆಯನ್ನು ಗೌರವಿಸುವುದು ಮತ್ತು ರಕ್ಷಿಸುವುದು"
– ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

**ಕೃಷಿ ಆಯುಕ್ತರು**